C-29.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳು ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಹೆಚ್ಚಿಸುವ ಬಗ್ಗೆ — ಆದೇಶ.

ooo

ಓದಲಾಗಿದೆ:

1) ಸರ್ಕಾರಿ ಆದೇಶ ಸಂಖ್ಯೆ.ಸಕಇ 108 ಬಿಪಿಎಸ್ 95, ಬೆಂಗಳೂರು ದಿನಾಂಕ 14-2-1997.

2) ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ. ಸಕನಿ:ಇಇ:4:ಸಿಆರ್-47:98-99 ದಿನಾಂಕ 1-6-2000.

3) ನಿರ್ದೇಶಕರು, ಹಿಂದುಳಿದ ವರ್ಗಗಳ ಇಲಾಖೆ ಇವರ ಪತ್ರ ಸಂಖ್ಯೆ. ಹಿಂವನಿ:ವನಿಶಾ-2:ವಿನಿ-169:98-99 ದಿನಾಂಕ 10-9-99.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗಳ ಕಾರ್ಯವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ದಿನಾಂಕ 1-1-1997ರಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಹೆಚ್ಚಿಸಲಾಗಿದೆ :-

ಅ) ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.250ರಿಂದ ರೂ.350.

ಆ) ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.300ರಿಂದ ರೂ.400.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಪಡಿತರ ಆಹಾರ ಸಾಮಗ್ರಿಗಳ ಬೆಲೆಯಲ್ಲಿ ಹೆಚ್ಚಳವಾಗಿರುವುದರಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ರೂ.350ರಿಂದ ರೂ.400ರ ವರೆಗೆ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ರೂ.400ರಿಂದ ರೂ.450ರ ವರೆಗೆ ಹೆಚ್ಚಿಸುವಂತೆ ಕೋರಿರುತ್ತಾರೆ.

ಈ ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳ ಕಾರ್ಯವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಈ ಕೆಳಕಂಡಂತೆ ಹೆಚ್ಚಿಸಲು ಸರ್ಕಾರವು ನಿರ್ಧರಿಸಿದೆ.

ಅ) ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.350ರಿಂದ ರೂ.400.

ಆ) ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.400ರಿಂದ ರೂ.450.

## ಸರ್ಕಾರಿ ಆದೇಶ ಸಂಖ್ಯೆ.ಸಕಇ 306 ಪಕಪ 99, ಬೆಂಗಳೂರು, ದಿನಾಂಕ 5-8-2000.

ಮೇಲಿನ ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ, ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಗೆ ಬರುವ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳ ಕಾರ್ಯವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಈ ಕೆಳಕಂಡಂತೆ ಹೆಚ್ಚಿಸಲಾಗಿದೆ.

ಅ) ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.350ರಿಂದ ರೂ.400.

ಆ) ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚ ರೂ.400ರಿಂದ ರೂ.450.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ನಾಗರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ — ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 300 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿಗಳು:

1) ಮಹಾಲೇಖಪಾಲರು (ಲೆಕ್ಕ ಮತ್ತು ತನಿಖೆ) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು.
4) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5) ಆರ್ಥಿಕ ಇಲಾಖೆ, ವೆಚ್ಚ-3, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಅಧೀನ ಕಾರ್ಯದರ್ಶಿ, ಸಚಿವ ಸಂಪುಟ ಇಲಾಖೆ(ಸಚಿವ ಸಂಪುಟ ಶಾಖೆ) ವಿಧಾನ ಸೌಧ, ಬೆಂಗಳೂರು.
7) ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
8) ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು.
9) ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು.
10) ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿಗಳು.
11) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
12) ಮಾನ್ಯ ಸಮಾಜ ಕಲ್ಯಾಣ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ.
13) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
14) ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
15) ಅಧೀನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ(ಸಮನ್ವಯ) 5 ಪ್ರತಿಗಳು.
16) ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು.
17) ವಾರದ ರಾಜ್ಯ ಪತ್ರ.